ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ಬೆಂಗಳೂರು ಸುತ್ತ ಮುತ್ತ ನಗರದಲ್ಲಿ ಅನಧಿಕೃತವಾಗಿ ತಲೆ ಎತ್ತಿರುವ ಗಣಿಗಾರಿಕೆ ಬಗ್ಗೆ

ಶ್ರೀ ಎಂ. ನಾರಾಯಣ ಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

125 (143) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ದಕ್ಷಿಣ ತಾಲ್ಲೂಕು, ತಾವರೆಕೆರೆ ಹೋಬಳಿಯ ಸುತ್ತಮುತ್ತ ಅನಧಿಕೃತವಾಗಿ ಕಲ್ಲು ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿಯ ಅನಧಿಕೃತ ಕಲ್ಲು ಗಣಿಗಾರಿಕೆಯಿಂದ ಪರಿಸರ ಮಾಲಿನ್ಯವಾಗಿ ಸ್ಥಳೀಯ ಗ್ರಾಮಸ್ಥರು ಮತ್ತು ವಿದ್ಯಾರ್ಥಿಗಳು ಅನಾರೋಗ್ಯಕ್ಕೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ರೀತಿಯ ಗಣಿಗಾರಿಕೆಯಿಂದ ಅಧಿಕ ಭಾರದ ವಾಹನಗಳ ಓಡಾಟದಿಂದ ಸಾರ್ವಜನಿಕ ರಸ್ತೆಗಳು ಹಾಳಾಗಿದ್ದು, ರಸ್ತೆಗಳು ದುರಸ್ಥಿಯಾಗದೆ ಸಾರ್ವಜನಿಕರು ವಾಹನದಲ್ಲಿ ಹೋಗುವಾಗ ಆಯತಪ್ಪಿ ಬಿದ್ದು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಇದನ್ನು ಸರಿಪಡಿಸದಿರಲು ಕಾರಣಗಳೇನು; ಅನಧಿಕೃತ ಕಲ್ಲು ಗಣಿಗಾರಿಕೆಯನ್ನು ನಡೆಸುವಲ್ಲಿ ಅಧಿಕಾರಿ/ನೌಕರರು ಶಾಮೀಲಾಗಿರುವುದು ನಿಜವೇ ?